ದಿನಾಂಕ 08-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ಅರ್ಜಿದಾರಳ ಪರ ಶ್ರೀ. ಎಂ.ಎ.ಜಿ. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ.

ಅರ್ಜಿಗೆ ಸಂಬಂಧಿಸಿದಂತೆ, ನನ್ನ ಮತ್ತು ಎದುರುದಾರನ ಮದುವೆ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ. 1 ಎಂದು ಗುರುತಿಸಲಾಯಿತು.

ಎಂ.ಸಿ. ನಂ. 6/2022 ರಲ್ಲಿ ಎದುರುದಾರ ಸಲ್ಲಿಸಿದ ಮುಖ್ಯ ವಿಚಾರಣೆ ಪ್ರಮಾಣ ಪತ್ರದ ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿ.ಪಿ. 2 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿರುತ್ತಾರೆ, ನೀಡಿ ಮುಂದೂಡಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

1 ನೇ ಹೆಚ್ಚುವರಿ ಸಿಜೆ & ಜೆಎಂಎಫ್‌ಸಿ, ನ್ಯಾಯಾಲಯ,
ಸಿಂಧನೂರು.